ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ.

ಜ್ಞಾನಸಹ್ಯಾದ್ರಿ, ಶಂಕರಘಟ್ಟ–577451, ಶಿವಮೊಗ್ಗ, ಕರ್ನಾಟಕ.

Phone No: 08282–256166, mob: 7022254993 ಇ–ಮೇಲ್: regexamku@gmail.com, ವೆಬ್‌ಸೈಟ್: www.kuvempu.ac.in

ಸಂಖ್ಯೆ: ಕುವಿ/ಪವಿ/ಪಿಸಿ/ 3538 /2026–27 ದಿನಾಂಕ:04–11–2025

ಪರೀಕ್ಷಾ ಪ್ರಕಟಣೆ

ವಿಷಯ: ಡಿಸೆಂಬರ್–2026ರ ಮಾಹೆಯಲ್ಲಿ ನಡೆಯಲಿರುವ ಬಿ.ಇಡಿ, ಪದವಿಯ ದ್ವಿತೀಯ ಮತ್ತು ಚತುರ್ಥ ಸೆಮಿಸ್ಟರ್‌ನ **Fresher's & Repeaters** ವಿದ್ಯಾರ್ಥಿಗಳ ಪರೀಕ್ಷೆಗೆ ಸಂಬಂಧಿಸಿದಂತೆ **UUCMS** ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿ ಜೊತೆಗೆ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ: 1. ವಿಶ್ವವಿದ್ಯಾಲಯ ಅಧಿಸೂಚನೆ ಸಂಖ್ಯೆ:ಕುವಿ:ಎಸಿ–3:ಬಿ.ಇಡಿ:27/2:1746: 2026–27. ದಿನಾಂಕ: 03–08–2026

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:03–11–2026

*****

2026–27ನೇ ಸಾಲಿನ ಡಿಸೆಂಬರ್–2026ರ ಮಾಹೆಯಲ್ಲಿ ನಡೆಯಲಿರುವ **ಬಿ.ಇಡಿ, ಪದವಿಯ ದ್ವಿತೀಯ ಹಾಗೂ ಚತುರ್ಥ ಸೆಮಿಸ್ಟರ್ Fresher's & Repeaters** ವಿದ್ಯಾರ್ಥಿಗಳ **UUCMS** ಪರೀಕ್ಷೆಗಳು **ದಿನಾಂಕ:21–12–2026** ರಿಂದ ನಡೆಯಲಿವೆ ಹಾಗೂ ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು **UUCMS ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ** ಪರೀಕ್ಷಾ ಶುಲ್ಕವನ್ನು ಪಾವತಿಸಿ ರಶೀದಿಯನ್ನು ಅರ್ಜಿಗೆ ಲಗತ್ತಿಸಿ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವ (ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

ಕಡ್ಡಾಯವಾಗಿ ಆನ್‌ಲೈನ್‌ನಲ್ಲಿಯೇ ಅರ್ಜಿ ಸಲ್ಲಿಸುವುದು, ಕೊನೆಯ ದಿನಾಂಕದವರೆಗೆ ಅರ್ಜಿ ಸಲ್ಲಿಸಲು ಕಾಯದೇ ಮುಂಚಿತವಾಗಿಯೇ ಅನ್‌ಲೈನ್‌ನಲ್ಲಿ ಸಲ್ಲಿಸುವುದರಿಂದ ಅಂತ್ಯದಲ್ಲಿ ಉಂಟಾಗುವ ಸರ್ವರ್ ದಟ್ಟಣೆಯ ಅಡಚಣೆ ತಪ್ಪಿಸಬಹುದಾಗಿದೆ.

ಲಿಖಿತ/ಪ್ರಾಯೋಗಿಕ ಪರೀಕ್ಷೆಗಳು ಪ್ರಾರಂಭವಗುವ ದಿನಾಂಕಗಳ ವಿವರ
1) ಪ್ರಾಯೋಗಿಕ ಪರೀಕ್ಷೆಗಳ – ರೆಗ್ಯೂಲರ್ ವಿದ್ಯಾರ್ಥಿಗಳಿಗೆ ದಿನಾಂಕ: 05–12–2026 ರೊಳಗೆ ಮುಕ್ತಾಯಗೊಳಿಸುವುದು.
2) ಲಿಖಿತ ಪರೀಕ್ಷೆಗಳು ದಿನಾಂಕ: 21–12–2026ರಿಂದ ಪ್ರಾರಂಭವಾಗುತ್ತದೆ.
3) ಆಂತರಿಕ ಅಂಕಗಳನ್ನು ಮತ್ತು ಹಾಜರಾತಿಗಳನ್ನು ಆನ್‌ಲೈನ್‌ನಲ್ಲಿ ದಿನಾಂಕ: 16–12–2026 ರೊಳಗೆ ಕಡ್ಡಾಯವಾಗಿ ನಮೂದಿಸಬೇಕು.
4) ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ದಿನಾಂಕ: 18–12–2026 ರಿಂದ ದಿನಾಂಕ: 20–12–2026ರೊಳಗೆ ಮುದ್ರಿಸಿಕೊಳ್ಳಬೇಕು.

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು:		
1)	ವಿಳಂಬ ಶುಲ್ಕವಿಲ್ಲದೆ	06–11–2026 ರಿಂದ 14–11–2026
2)	ವಿಳಂಬ ಶುಲ್ಕ ₹100/–ರಂತೆ (ಪ್ರತಿ ಸೆಮಿಸ್ಟರ್‌ಗೆ)	15–11–2026 ರಿಂದ 17–11–2026
3)	ವಿಳಂಬ ಶುಲ್ಕ ₹500/–ರಂತೆ (ಪ್ರತಿ ಸೆಮಿಸ್ಟರ್‌ಗೆ)	18–11–2026 ರಿಂದ 19–11–2026
4)	ವಿಶೇಷ ವಿಳಂಬ ಶುಲ್ಕ ₹1000/–ರಂತೆ (ಪ್ರತಿ ಸೆಮಿಸ್ಟರ್‌ಗೆ)	20–11–2026

ಶುಲ್ಕದ ವಿವರಗಳು ದ್ವಿತೀಯ ಹಾಗೂ ಚತುರ್ಥ ಸೆಮಿಸ್ಟರ್		
1)	ಪೂರ್ಣ ಪರೀಕ್ಷೆಗೆ (Per Semester)	₹ 1500/-
2)	ಪ್ರತಿ ಪತ್ರಿಕೆಗೆ(ಆ ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆ ₹ 1500/-ಒಳಪಟ್ಟು)	₹ 320/-
3)	ಪ್ರಾಯೋಗಿಕ ಪರೀಕ್ಷೆಗೆ	₹ 175/-
4)	ಸೈದ್ಧಾಂತಿಕ ಪರೀಕ್ಷೆಯ ಗಣಕೀಕೃತ ಸಂರಕ್ಷಣೆ ಶುಲ್ಕ	₹ 200/-

ತಾತ್ಕಾಲಿಕ ತೇರ್ಗಡೆ ಪ್ರಮಾಣ ಪತ್ರ(ಅಂತಿಮ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಮಾತ್ರ)		₹ 590/-
ಘಟಿಕೋತ್ಸವ ಪ್ರಮಾಣ ಪತ್ರ ಶುಲ್ಕ ಅಂತಿಮ ವರ್ಷದ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಮಾತ್ರ	ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ	₹ 1150/-
	ಎಸ್ಸಿ/ಎಸ್ಟಿ ವಿದ್ಯಾರ್ಥಿಗಳಿಗೆ	₹ 1000/-

ವಿದ್ಯಾರ್ಥಿಗಳಿಗೆ ಸೂಚನೆ:

1) ವಿದ್ಯಾರ್ಥಿಗಳು UUCMS/ Non - UUCMS ತಂತ್ರಾಂಶದ ಮೂಲಕ onlineನಲ್ಲಿ ಅರ್ಜಿ ಸಲ್ಲಿಸಲು, ನೋಂದಣಿ ಸಂಖ್ಯೆ ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕ ವಿವರಗಳುಳ್ಳ ಪರೀಕ್ಷಾ ಅರ್ಜಿಯನ್ನು ಮುದ್ರಿಸಿ ನೆಟ್ ಬ್ಯಾಂಕಿಂಗ್‌ನಲ್ಲಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ಕಾಲೇಜಿಗೆ ಸಲ್ಲಿಸಬೇಕು.

2) ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card / Credit Card / Net Banking / Paytm wallet ಮೂಲಕ ನೇರವಾಗಿ ಬ್ಯಾಂಕ್ ಖಾತೆಯಿಂದ ಪಾವತಿಸಿ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ವಿಶೇಷ ಸೂಚನೆ: ವಿದ್ಯಾರ್ಥಿಗಳು Internet Browsing centreನ ಮಾಲಿಕರ ಬ್ಯಾಂಕ್ ಖಾತೆಯ ಮೂಲಕ ವಿಶ್ವವಿದ್ಯಾಲಯಕ್ಕೆ ಶುಲ್ಕ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು.

ಅ). ರೂ.₹ 2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಅ) **S.S.P. ಪೋರ್ಟಲ್ ಮುಖಾಂತರ ಸಮಾಜ ಕಲ್ಯಾಣ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಜಮಾ ಮಾಡಲಾಗುತ್ತಿರುವುದರಿಂದ, ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು.** ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು / ವಿದ್ಯಾರ್ಥಿ ವೇತನ ಮಂಜೂರಾಗದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಪ್ರವರ್ಗ-1ಕ್ಕೆ ₹ 2.5ಲಕ್ಷ ಹಾಗೂ ₹ 1 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ 2ಎ, 2ಬಿ, 3ಎ, 3ಬಿ ಹಾಗೂ ಇತರೆ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ./201/ಬಿ.ಎಂ.ಎಸ್/2011 ಬೆಂಗಳೂರು ದಿನಾಂಕ: 23-06-2012ರಲ್ಲಿ ತಿಳಿಸಿರುತ್ತಾರೆ. ಶುಲ್ಕ ವಿನಾಯಿತಿ ಬಯಸುವ ಎಲ್ಲಾ ವಿದ್ಯಾರ್ಥಿಗಳು ಸಕ್ಷಮ ಅಧಿಕಾರಿಗಳಿಂದ ಪಡೆದ ಆದಾಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಕಾಲೇಜಿಗೆ ಒಪ್ಪಿಸಬೇಕು.

3) **ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳೂ ಕೂಡಾ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು.**

4) **ವಿದ್ಯಾರ್ಥಿಗಳು ಪಾವತಿಸುವ ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣಕ್ಕಾಗಿ ಹಿಂದಿರುಗಿಸಲಾಗುವುದಿಲ್ಲ.**

ಪ್ರಾಚಾರ್ಯರಿಗೆ ಸೂಚನೆಗಳು

1) ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಿ ಸಲ್ಲಿಸಿದ ಚಲನ್‌ನ್ನು ಪರಿಶೀಲಿಸಿ ಕೊನೆ ದಿನಾಂಕದಿಂದ ಎರಡು ದಿನದೊಳಗಾಗಿ ತಮ್ಮ ಮೇಲು ಸಹಿಯೊಂದಿಗೆ ಚಲನ್ ಪ್ರತಿ ಹಾಗೂ ಇತರೆ ದಾಖಲೆಗಳೊಂದಿಗೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕು. ನಂತರ ಕಳುಹಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

2) **ಕುಲಸಚಿವ(ಆಡಳಿತ)/ಶೈಕ್ಷಣಿಕ ವಿಭಾಗದಿಂದ ಪ್ರವೇಶಾತಿ ಅನುಮೋದನೆಯಾಗದೇ ಹಾಗೂ ಕಡಿಮೆ ಹಾಜರಾತಿ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.** ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚುವರಿಯಾಗಿ ಕಾಲೇಜಿಗೆ ಅಥವಾ ವ್ಯಾಸಂಗಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.

3) ಹಾಜರಾತಿ ಕೊರತೆ ಇರುವಂತಹ ಹಾಗೂ ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳ ಪಟ್ಟಿಯನ್ನು ಪರೀಕ್ಷೆಗಳು ಆರಂಭವಾಗುವ 15 ದಿನ ಮುಂಚಿತವಾಗಿ ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸುವುದು. ಒಂದು ವೇಳೆ ಹಾಜರಾತಿ ಕೊರತೆ ಹಾಗೂ ಪ್ರವೇಶಾನುಮೋದನೆಯಾಗದೇ ಇರುವ ವಿದ್ಯಾರ್ಥಿಗಳು ಮುಂದಿನ ಸೆಮಿಸ್ಟರ್‌ಗೆ ಅರ್ಹತೆಯಿಲ್ಲದೆ ಪರೀಕ್ಷಾ ಅರ್ಜಿ ಸಲ್ಲಿಸಿದ್ದಲ್ಲಿ/ಪರೀಕ್ಷೆ ತೆಗೆದುಕೊಂಡಲ್ಲಿ ಮುಂದಿನ ಎಲ್ಲಾ ತರಹದ ತೊಂದರೆಗಳಿಗೆ ಕಾಲೇಜಿನ ಪ್ರಾಂಶುಪಾಲರೆ ನೇರ ಜವಾಬ್ದಾರರಾಗಿರುತ್ತಾರೆ.

4) S.S.P. ಪೋರ್ಟಲ್ ಮುಖಾಂತರ ಸಮಾಜ ಕಲ್ಯಾಣ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾಥಿಗಳ ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಜಮಾ ಮಾಡಲಾಗುತ್ತಿರುವುದರಿಂದ, ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸುವಂತೆ ನೋಡಿಕೊಳ್ಳಬೇಕು.

5) ಪ್ರವರ್ಗ–1ಕ್ಕೆ 2.5ಲಕ್ಷ ಹಾಗೂ ರೂ. 1ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ 2ಎ, 2ಬಿ, 3ಎ, 3ಬಿ ಹಾಗೂ ಇತರೆ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ./201/ಬಿ.ಎಂ.ಎಸ್.2011 ಬೆಂಗಳೂರು ದಿನಾಂಕ: 23–06–2012ರಲ್ಲಿ ತಿಳಿಸಿರುತ್ತಾರೆ.

6) ಸೈದ್ಧಾಂತಿಕ / ಪ್ರಾಯೋಗಿಕ ಪರೀಕ್ಷೆ ನಡೆಸಲು ಬೇಕಾದ ಉತ್ತರ ಪತ್ರಿಕೆ ಮುದ್ರಿತ ನಮೂನೆಗಳು ಹಾಗೂ ಲೇಖನ ಸಾಮಾಗ್ರಿಗಳ ಬೇಡಿಕೆ ಪಟ್ಟಿಗಳನ್ನು **ದಿನಾಂಕ: 05–12–2026ರೊಳಗಾಗಿ** ಉಪ ಕುಲಸಚಿವರು, ಲೆಕ್ಕ ಶಾಖೆ, ಪರೀಕ್ಷಾ ವಿಭಾಗ, ಇವರಿಗೆ ತಲುಪಿಸಲು ಸೂಚಿಸಿದೆ.

7) ಪ್ರಶ್ನೆ ಪತ್ರಿಕೆಗಳ ಬೇಡಿಕೆ ಪಟ್ಟಿಯನ್ನು **ದಿನಾಂಕ: 05–12–2026ರೊಳಗೆ** ಉಪ ಕುಲಸಚಿವರು, ಪರೀಕ್ಷಾ ವಿಭಾಗ, ರಹಸ್ಯ ವಿಭಾಗ, ಇವರಿಗೆ ಕೋರಿಯರ್ ಮೂಲಕ ಕಳುಹಿಸಿಕೊಡಲು ತಿಳಿಸಲಾಗಿದೆ. ಪ್ರಶ್ನೆ ಪತ್ರಿಕೆ ಬೇಡಿಕೆ ಪಟ್ಟಿಯ ನಮೂನೆಯನ್ನು ಈ ಪ್ರಕಟನೆಯೊಂದಿಗೆ ಲಗತ್ತಿಸಿದೆ.

8) ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸದೇ ಬಿಟ್ಟು ಹೋದಲ್ಲಿ (Monitoring committeeಯಲ್ಲಿ ಪರಿಶೀಲಿಸಿ Freeze ಮಾಡಿದ ನಂತರ) ಯಾವುದೇ ಕಾರಣಕ್ಕೂ ಹಾರ್ಡ್ ಕಾಪಿಯನ್ನು ನಂತರ ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು. (ಹೆಚ್ಚಿನ ಮಾಹಿತಿಗೆ 7022255745 ಸಂಪರ್ಕಿಸಬಹುದು.)

R-DR-04/1126

ಕುಲಸಚಿವರು(ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ.
ಜ್ಞಾನಸಹ್ಯಾದ್ರಿ.
ಶಂಕರಘಟ್ಟ 577 451.

ಗೆ,

01 ಶಿವಮೊಗ್ಗ/ಚಿಕ್ಕಮಗಳೂರು ಜಿಲ್ಲೆಗಳ ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಡುವ ಸಂಯೋಜಿತ ಬಿ.ಇಡಿ. ಕಾಲೇಜುಗಳ ಪ್ರಾಂಶುಪಾಲರುಗಳು.

02 ಶ್ರೀ ಸಿದ್ದಲಿಂಗ ಜಿ. ಪಾಟೀಲ್, ಉಪಕುಲಸಚಿವರು (ಪರೀಕ್ಷಾಂಗ) ಮತ್ತು ನೋಡಲ್ ಅಧಿಕಾರಿಗಳು (UUCMS), ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ – ಸೂಕ್ತ ಕ್ರಮಕ್ಕಾಗಿ.

03 ತಾಂತ್ರಿಕ ಸಹಾಯಕರು, ಪರೀಕ್ಷಾ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ – ಸೂಕ್ತ ಕ್ರಮಕ್ಕಾಗಿ.